ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದ ಸರ್ಕಾರಿ ಪ್ರೌಢ ಶಾಲಾ ಹಿಂದಿ ಶಿಕ್ಷಕರ ವಿವರ ನೀಡುವುದು

ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):-

626(734) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದಿ ವಿಷಯ ಶಿಕ್ಷಕರುಗಳ ಸಂಖ್ಯೆ ಎಷ್ಟು; ಮತ್ತು ಅವರ ವಿದ್ಯಾರ್ಹತೆ ಏನು;

(ಆ) ಸದರಿ ಹಿಂದಿ ಶಿಕ್ಷಕರು ಯಾವ ಯಾವ ವರ್ಷಗಳಲ್ಲಿ ಹಿಂದಿ ಬಿ.ಎಡ್., ಅನ್ನು ಮುಗಿಸಿಕೊಂಡು ನೇಮಕಾತಿ ಹೊಂದಿರುತ್ತಾರೆ ಮತ್ತು ಅವರು ಬಿ.ಎಡ್., ಪದವಿ ಪಾಸಾದ ವರ್ಷಗಳ ವಿವರದೊಂದಿಗೆ ಜಿಲ್ಲಾವಾರು ವಿವರ ನೀಡುವುದು ?